ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE


## ಪೌರತ್ವ ತಿದ್ದುಪಡಿ ಮಸೂದೆ

# ಲೋಕಸಭೆ ಬಹುಮತದ ಮುದ್ರೆ

ಸವದೆಹಲಿ: ಕೇಂದ್ರ ಸರ್ಕಾರದ ಬಹುನಿರೀಕ್ಷಿತ ಪೌರತ್ವ(ತಿದ್ದುಪಡಿ)ಮಸೂದೆಗೆ ಸೋಮವಾರ ಲೋಕಸಭೆಯಲ್ಲಿ ಬಹುಮತದ ಅಂಗೀಕಾರ ದೊರೆತಿದೆ. ಸದನದಲ್ಲಿ ಹಾಜರಿದ್ದ 375 ಸಂಸದರ ಪೈಕಿ ಮಸೂದೆ ಪರವಾಗಿ 293 ಸದಸ್ಯರು ಮತ ಚಲಾಯಿಸಿದರೆ ವಿರುದ್ಧವಾಗಿ 82 ಮತಗಳು ಬಿದ್ದವು.

ಬೆಳಗ್ಗೆ ಸದನದ ಕಲಾಪ ಶುರುವಾಗುತ್ತಿದ್ದಂತೆ ಗೃಹ ಸಚಿವ ಅಮಿತ್ ಶಾ ಲೋಕಸಭೆಯಲ್ಲಿ ಈ ಉದ್ದೇಶಿತ ಮಸೂದೆಯನ್ನು ಮಂಡಿಸಿದರು. ಈ ತಿದ್ದುಪಡಿ ಮಸೂದೆ ದೇಶದ ಅಲ್ಪಸಂಖ್ಯಾತರ ವಿರುದ್ಧವಾಗಿ ಶೇಕಡಾ 0.001ರಷ್ಟು ಕೂಡ ಇಲ್ಲ ಎಂದರು.

ಲೋಕಸಭೆಯಲ್ಲಿ ಮಸೂದೆಯನ್ನು ಮಂಡಿಸುತ್ತಿದ್ದಂತೆ ತೀವ್ರ ಗದ್ದಲ, ಕೋಲಾಹಲ ಉಂಟಾಯಿತು. ಮುಸ್ಲಿಮರಿಗೆ ಭಾರತ ಪೌರತ್ವ ನಿರಾಕರಿಸುವ ಈ ಮಸೂದೆ ಸಂವಿಧಾನದ ಸೆಕ್ಷನ್ 14ರ ಸಮಾನತೆಯನ್ನು ಉಲ್ಲಂಘಿಸುತ್ತದೆ ಎಂದು ವಿಪಕ್ಷ ಸದಸ್ಯರು ಆರೋಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಗೃಹ ಸಚಿವ ಅಮಿತ್ ಶಾ, ದೇಶಕ್ಕೆ ಸ್ವತಂತ್ರ ಬಂದ ಬಳಿಕ ಕಾಂಗ್ರೆಸ್ ಧರ್ಮದ ಆಧಾರದ ಮೇಲೆ ದೇಶವನ್ನು ವಿಭಜಿಸದೇ ಇದ್ದಿದ್ದರೆ ಪ್ರಸ್ತುತ ತಿದ್ದುಪಡಿ ಮಸೂದೆಯ ಅವಶ್ಯಕತೆ ಬರುತ್ತಿರಲಿಲ್ಲ ಎಂದು ತಿರುಗೇಟು ನೀಡಿದರು.



- ಸಂವಿಧಾನ ಉಲ್ಲಂಘನೆ ವಿಪಕ್ಷಗಳ ಗದ್ದಲ
- ಮುಸ್ಲಿಮೇತರ ವಲಸಿಗರಿಗೆ ಭಾರತ ಪೌರತ್ವ
- ಪಾಕ್-ಅಫ್ಘಾನ್-ಬಾಂಗ್ಲಾದೇಶಿಗರಿಗೆ ಆದ್ಯತೆ

ಆಫ್ಘಾನಿಸ್ತಾನ, ಪಾಕಿಸ್ತಾನ ಮತ್ತು ಬಾಂಗ್ಲಾದೇಶಗಳಿಂದ ವಲಸೆ ಬಂದು 6 ವರ್ಷ ಭಾರತದಲ್ಲಿ ನೆಲೆಸಿದ್ದರೆ ಅಂತಹ ಸಿಖ್, ಕ್ರೈಸ್ತರು, ಪಾರ್ಸಿ ಮತ್ತು ಜೈನ ಸಮುದಾಯದ ಜನತೆ ಈ ತಿದ್ದುಪಡಿ ಮಸೂದೆಯಿಂದ ನಾಗರಿಕತ್ವ ಸಿಗಲಿದೆ. ಆದರೆ ಈಶಾನ್ಯ ರಾಜ್ಯಗಳು ಈ ತಿದ್ದುಪಡಿಗೆ ತೀವ್ರ ವಿರೋಧ ವ್ಯಕ್ತಪಡಿಸಿವೆ.

ಈ ಮಸೂದೆ ಹಿಂದೂ-ಮುಸ್ಲಿಮರ ನಡುವೆ ಅಗೋಚರ ವಿಭಜನೆ ಸೃಷ್ಟಿಸುತ್ತದೆ ಎಂದು ಶಿವಸೇನೆ ಹೇಳಿದೆ. ಎಸ್ಪಿ ಮುಖಂಡ ಅಖಿಲೇಶ್‌ಯಾದವ್, ಕಾಂಗ್ರೆಸ್ ನಾಯಕ ಶಶಿತರೂರ್, ಡಿಎಂಕೆ ಮುಖ್ಯಸ್ಥ ಸ್ಟಾಲಿನ್ ಮೊದಲಾದವರು ವಿರೋಧಿಸಿದ್ದಾರೆ. ಇತ್ತೀಚೆಗೆ ಮಸೂದೆಗೆ ಕೇಂದ್ರ ಸಂಪುಟ ಸಮ್ಮತಿಸಿತ್ತು. ಲೋಕಸಭೆ ಒಪ್ಪಿರುವ ಮಸೂದೆ ರಾಜ್ಯಸಭೆ ಅನುಮೋದನೆ ಪಡೆಯಬೇಕಿದ್ದು ಅದಾದ ಬಳಿಕ ರಾಷ್ಟ್ರಪತಿ ಅಂಕಿತದೊಂದಿಗೆ ಕಾನೂನಾಗಿ ಮಾರ್ಪಟ್ಟು ಜಾರಿಯಾಗಲಿದೆ.

### ಈಶಾನ್ಯ ರಾಜ್ಯಗಳಿಗೆ ಅನ್ವಯಿಸದು

ಮಸೂದೆಗೆ ತೀವ್ರ ವಿರೋಧ ವ್ಯಕ್ತವಾಗಿದ್ದರಿಂದ ಸರ್ಕಾರ ಸಂವಿಧಾನದ 6ನೇ ವೇಳಾಪಟ್ಟಿಯಲ್ಲಿರುವ ಅಸ್ಸಾಂ, ಮೇಘಾಲಯ, ತ್ರಿಪುರ ಮತ್ತು ಮಿಜೋರಾಂನಲ್ಲಿ ಸ್ವಾಯತ್ತ ಬುಡಕಟ್ಟು ಪ್ರಾಬಲ್ಯದ ಪ್ರದೇಶಗಳಿಗೆ ವಿನಾಯಿತಿ ನೀಡಿದೆ. ಆಂತರಿಕ ಸಾಲಿನ ಪರವಾನಗಿ ಹೊಂದಿರುವ ರಾಜ್ಯಗಳಾದ ಅರುಣಾಚಲ ಪ್ರದೇಶ, ನಾಗಾಲ್ಯಾಂಡ್ ಮತ್ತು ಮಿಜೋರಾಂ ಈ ಮಸೂದೆ ಅನ್ವಯಿಸುವುದಿಲ್ಲ ಎಂದು ಅಮಿತ್ ಶಾ ಹೇಳಿದ್ದಾರೆ.

ಈಶಾನ್ಯ ರಾಜ್ಯಗಳಲ್ಲಿ ಮಸೂದೆ ತಿದ್ದುಪಡಿ ವಿರೋಧಿಸಿ ಭಾರೀ ಪ್ರತಿರೋಧ ವ್ಯಕ್ತವಾಗಿತ್ತು. ಮಣಿಪುರ ರಾಜ್ಯವನ್ನು ತಿದ್ದುಪಡಿ ಮಸೂದೆಯಿಂದ ಹೊರಗಿಡಿ ಎಂದು ಅಲ್ಲಿನ ಸಿಎಂ ಬಿರೇನ್‌ಸಿಂಗ್ ಕೇಂದ್ರಕ್ಕೆ ಆಗ್ರಹಿಸಿದ್ದಾರೆ. ಪ್ರತಿಭಟನೆ ನಡೆಸದಂತೆ ಈಶಾನ್ಯ ರಾಜ್ಯಗಳಿಗೆ ಅಮಿತ್ ಶಾ ಮನವಿ ಮಾಡಿದ್ದಾರೆ.